# ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ** : 2023-24ನೇ ಸಾಲಿನಿಂದ ರಾಜ್ಯ ಪಠ್ಯಕ್ರಮದ ಸರ್ಕಾರಿ ಅನುದಾನಿತ, ಅನುದಾನ ರಹಿತ ಶಾಲಾ ಮತ್ತು ಕಾಲೇಜುಗಳಲ್ಲಿ ವ್ಯಾಸಂಗ ಮಾಡುತ್ತಿರುವ 9ನೇ ತರಗತಿಯ ವಿದ್ಯಾರ್ಥಿಗಳಿಗೆ ಸಂಕಲನಾತ್ಮಕ ಮೌಲ್ಯಮಾಪನ-2 (SA-2) ಹಾಗೂ 11ನೇ ತರಗತಿಯ ವಿದ್ಯಾರ್ಥಿಗಳಿಗೆ ವಾರ್ಷಿಕ ಪರೀಕ್ಷೆಯನ್ನು ನಡೆಸುವ ಬಗ್ಗೆ.

**ಓದಲಾಗಿದೆ**: ಅಧ್ಯಕ್ಷರು, ಕರ್ನಾಟಕ ಶಾಲಾ ಪರೀಕ್ಷೆ ಮತ್ತು ಮೌಲ್ಯನಿರ್ಣಯ ಮಂಡಲಿ ರವರ ಕಡತ ಸಂಖ್ಯೆ: KSEAB/DPIE/A8(MIS)/9/2023-ASEC.

** ** **

**ಪ್ರಸ್ತಾವನೆ:**

ಮೇಲೆ ಓದಲಾದ ಪ್ರಸ್ತಾವನೆಯಲ್ಲಿ ಅಧ್ಯಕ್ಷರು, ಕರ್ನಾಟಕ ಶಾಲಾ ಪರೀಕ್ಷೆ ಮತ್ತು ಮೌಲ್ಯನಿರ್ಣಯ ಮಂಡಲಿ ಬೆಂಗಳೂರು, ಈಗಾಗಲೇ 10 ಮತ್ತು 12ನೇ ತರಗತಿಗಳಿಗೆ ವಾರ್ಷಿಕ ಪರೀಕ್ಷೆಗಳನ್ನು ಹಾಗೂ 5 ಮತ್ತು 8ನೇ ತರಗತಿಗಳಿಗೆ ಮೌಲ್ಯಾಂಕನವನ್ನು ಕರ್ನಾಟಕ ಶಾಲಾ ಪರೀಕ್ಷೆ ಮತ್ತು ಮೌಲ್ಯನಿರ್ಣಯ ಮಂಡಲಿಯಿಂದ ನಡೆಸಲಾಗುತ್ತಿದ್ದು, 9ನೇ ತರಗತಿಯ ವಿದ್ಯಾರ್ಥಿಗಳಿಗೆ ಸಂಕಲನಾತ್ಮಕ ಮೌಲ್ಯಮಾಪನ-2 (SA-2) ಮತ್ತು 11ನೇ ತರಗತಿಯ ವಿದ್ಯಾರ್ಥಿಗಳಿಗೆ ವಾರ್ಷಿಕ ಪರೀಕ್ಷೆಯನ್ನು ಮಂಡಲಿಯಿಂದಲೇ ನಡೆಸಿದ್ದಲ್ಲಿ ಎಲ್ಲಾ ವಿದ್ಯಾರ್ಥಿಗಳ ಕಲಿಕಾ ಮಟ್ಟವನ್ನು ಪರಿಶೀಲಿಸುವ ಮೂಲಕ ವಿದ್ಯಾರ್ಥಿಗಳ ಕಲಿಕಾ ಪ್ರಗತಿಯನ್ನು ಬಲವರ್ಧನೆಗೊಳಿಸಬಹುದು ಎಂದು ಅಭಿಪ್ರಾಯಿಸಿರುತ್ತಾರೆ.

1966 ರ ಕರ್ನಾಟಕ ಪ್ರೌಢಶಿಕ್ಷಣ ಪರೀಕ್ಷಾ ಮಂಡಳಿ ಕಾಯಿದೆ ಮತ್ತು ಕರ್ನಾಟಕ ಪ್ರೌಢಶಿಕ್ಷಣ ಪರೀಕ್ಷಾ ಮಂಡಳಿ ತಿದ್ದುಪಡಿ ಅಧಿನಿಯಮ 2022 ರ ನಿಯಮ 15 (A) (IV) ರಲ್ಲಿ Any other Examination which the State Government may from time to time by motification specify ಎಂದಿದ್ದು, ಕರ್ನಾಟಕ ಶಾಲಾ ಪರೀಕ್ಷೆ ಮತ್ತು ಮೌಲ್ಯ ನಿರ್ಣಯ ಮಂಡಲಿಯಿಂದ ಎಸ್.ಎಸ್.ಎಲ್.ಸಿ ಮತ್ತು ಪಿ.ಯು.ಸಿ ಪರೀಕ್ಷೆಗಳ ಜೊತೆಗೆ ಇತರೆ ಪರೀಕ್ಷೆಗಳನ್ನು ನಡೆಸಲು ಸರ್ಕಾರಿ ಆದೇಶವನ್ನು ಹೊರಡಿಸಬೇಕಿರುತ್ತದೆ. ಈ ಸಂಬಂಧ 9ನೇ ತರಗತಿಯ ವಿದ್ಯಾರ್ಥಿಗಳಿಗೆ ಸಂಕಲನಾತ್ಮಕ ಮೌಲ್ಯಮಾಪನ-2 (SA-2) ಮತ್ತು 11ನೇ ತರಗತಿಯ ವಿದ್ಯಾರ್ಥಿಗಳಿಗೆ ವಾರ್ಷಿಕ ಪರೀಕ್ಷೆಯನ್ನು ಕರ್ನಾಟಕ ಶಾಲಾ ಪರೀಕ್ಷೆ ಮತ್ತು ಮೌಲ್ಯನಿರ್ಣಯ ಮಂಡಲಿಯಿಂದ ನಡೆಸುವ ಕುರಿತು ಪರಿಶೀಲಿಸಿ ಈ ಕೆಳಕಂಡಂತೆ ಆದೇಶ.

**ಸರ್ಕಾರಿ ಆದೇಶ ಸಂಖ್ಯೆ: ಇಪಿ 202 ಎಸ್ಎಲ್‌ಬಿ 2023.**
**ಬೆಂಗಳೂರು, ದಿನಾಂಕ: 21ನೇ ಸೆಪ್ಟೆಂಬರ್ 2023**

ಪ್ರಸ್ತಾವನೆಯಲ್ಲಿ ವಿವರಿಸಿರುವ ಹಿನ್ನೆಲೆಯಲ್ಲಿ 2023-24ನೇ ಸಾಲಿನಿಂದ ಕರ್ನಾಟಕ ಶಾಲಾ ಪರೀಕ್ಷೆ ಮತ್ತು ಮೌಲ್ಯನಿರ್ಣಯ ಮಂಡಲಿ ವತಿಯಿಂದ 9ನೇ ತರಗತಿಯ ವಿದ್ಯಾರ್ಥಿಗಳಿಗೆ ಸಂಕಲನಾತ್ಮಕ ಮೌಲ್ಯಮಾಪನ-2 (SA-2) ಮತ್ತು 11ನೇ ತರಗತಿಯ ವಿದ್ಯಾರ್ಥಿಗಳಿಗೆ ವಾರ್ಷಿಕ ಪರೀಕ್ಷೆಯನ್ನು ನಡೆಸಲು ಈ ಕೆಳಕಂಡ ಷರತ್ತುಗಳಿಗೊಳಪಟ್ಟು ಸರ್ಕಾರವು ಅನುಮತಿ ನೀಡಿ ಆದೇಶಿಸಿದೆ.

**ಷರತ್ತುಗಳು:-**

1. *9ನೇ ತರಗತಿಯ ವಿದ್ಯಾರ್ಥಿಗಳಿಗೆ ಸಂಕಲನಾತ್ಮಕ ಮೌಲ್ಯಮಾಪನ-2 (SA-2) ಮತ್ತು 11ನೇ ತರಗತಿಯ ವಿದ್ಯಾರ್ಥಿಗಳಿಗೆ ವಾರ್ಷಿಕ ಪರೀಕ್ಷೆಯನ್ನು ಕರ್ನಾಟಕ ಶಾಲಾ ಪರೀಕ್ಷೆ*



Scanned with CamScanner

ಮತ್ತು ಮೌಲ್ಯನಿರ್ಣಯ ಮಂಡಲಿಯ ವತಿಯಿಂದ ಶಾಲಾ ಮತ್ತು ಕಾಲೇಜು ಹಂತದಲ್ಲಿಯೇ ನಡೆಸುವುದು.

2. 9ನೇ ತರಗತಿಯ ಸಂಕಲನಾತ್ಮಕ ಮೌಲ್ಯಮಾಪನ-2 ಕ್ಕೆ ಸಂಬಂಧಿಸಿದಂತೆ ಪ್ರಶ್ನೆ ಪತ್ರಿಕೆಗಳನ್ನು ಕರ್ನಾಟಕ ಶಾಲಾ ಪರೀಕ್ಷೆ ಮತ್ತು ಮೌಲ್ಯನಿರ್ಣಯ ಮಂಡಲಿಯ ಕೆ.ಎಸ್.ಕ್ಯು.ಎ.ಎ.ಸಿ ವತಿಯಿಂದ ರಾಜ್ಯಮಟ್ಟದಲ್ಲಿ ಸಿದ್ಧಪಡಿಸಿ ಸಂಬಂಧಿಸಿದ ಕ್ಷೇತ್ರಶಿಕ್ಷಣಾಧಿಕಾರಿಗಳ ಲಾಗಿನ್‌ನಲ್ಲಿ ಲಭ್ಯ ಮಾಡುವುದು.

3. 11ನೇ ತರಗತಿಯ ವಾರ್ಷಿಕ ಪರೀಕ್ಷೆಗೆ ಸಂಬಂಧಿಸಿದಂತೆ ಪ್ರಶ್ನೆ ಪತ್ರಿಕೆಗಳನ್ನು ಕರ್ನಾಟಕ ಶಾಲಾ ಪರೀಕ್ಷೆ ಮತ್ತು ಮೌಲ್ಯನಿರ್ಣಯ ಮಂಡಲಿಯ ಪಿಯು ಪರೀಕ್ಷಾ ವಿಭಾಗದಿಂದ ರಾಜ್ಯಮಟ್ಟದಲ್ಲಿ ಸಿದ್ಧಪಡಿಸಿ ಸಂಬಂಧಿಸಿದ ಜಿಲ್ಲಾ ಉಪನಿರ್ದೇಶಕರು ಶಾಲಾ ಶಿಕ್ಷಣ ಇಲಾಖೆ (ಪದವಿ ಪೂರ್ವ) ವಿಭಾಗದವರ ಲಾಗಿನ್‌ನಲ್ಲಿ ಲಭ್ಯ ಮಾಡುವುದು.

4. 9ನೇ ತರಗತಿಯ ಸಂಕಲನಾತ್ಮಕ ಮೌಲ್ಯಮಾಪನ-2 (SA-2) ಹಾಗೂ 11ನೇ ತರಗತಿಯ ವಾರ್ಷಿಕ ಪರೀಕ್ಷೆಗೆ ಆಯಾ ಶಾಲಾ / ಕಾಲೇಜುಗಳೇ ಪರೀಕ್ಷಾ ಕೇಂದ್ರಗಳಾಗಿರುತ್ತವೆ.

5. 9ನೇ ತರಗತಿಯ ಸಂಕಲನಾತ್ಮಕ ಮೌಲ್ಯಮಾಪನ-2 (SA-2) ನಡೆಯುವ ಸಂದರ್ಭದಲ್ಲಿ ಸಮೀಪದ ಶಾಲೆಗಳ ಶಿಕ್ಷಕರನ್ನು ಕೊಠಡಿ ಮೇಲ್ವಿಚಾರಕರನ್ನಾಗಿ ನೇಮಿಸುವುದು.

6. 11ನೇ ತರಗತಿಯ ವಾರ್ಷಿಕ ಪರೀಕ್ಷೆ ನಡೆಯುವ ಸಂದರ್ಭದಲ್ಲಿ ಆಯಾ ಕಾಲೇಜಿನ ಉಪನ್ಯಾಸಕರನ್ನೇ ಕೊಠಡಿ ಮೇಲ್ವಿಚಾರಕರನ್ನಾಗಿ ನೇಮಿಸುವುದು.

7. 9ನೇ ತರಗತಿಯ ಸಂಕಲನಾತ್ಮಕ ಮೌಲ್ಯಮಾಪನ-2ರ (SA-2) ಉತ್ತರ ಪತ್ರಿಕೆಗಳ ಮೌಲ್ಯ ಮಾಪನವನ್ನು ತಾಲ್ಲೂಕು ಹಂತದಲ್ಲಿ ಮತ್ತು 11ನೇ ತರಗತಿಯ ವಾರ್ಷಿಕ ಪರೀಕ್ಷೆಯ ಉತ್ತರ ಪತ್ರಿಕೆಗಳ ಮೌಲ್ಯ ಮಾಪನವನ್ನು ಸಂಬಂಧಿಸಿದ ಕಾಲೇಜುಗಳಲ್ಲಿಯೇ ನಿರ್ವಹಿಸುವುದು.

8. ಮೌಲ್ಯಮಾಪನ ಪೂರ್ಣಗೊಂಡ ತಕ್ಷಣವೇ ವಿದ್ಯಾರ್ಥಿಗಳ ಫಲಿತಾಂಶವನ್ನು ಸಂಬಂಧಿಸಿದ ಮುಖ್ಯ ಶಿಕ್ಷಕರು/ಪ್ರಾಂಶುಪಾಲರು ಎಸ್.ಎ.ಟಿ.ಎಸ್.ನಲ್ಲಿ ಅಪ್ಲೋಡ್ ಮಾಡುವುದು.

9. 9ನೇ ತರಗತಿಯ ಸಂಕಲನಾತ್ಮಕ ಮೌಲ್ಯಮಾಪನ-2ರಲ್ಲಿ (SA-2) ಯಾವುದೇ ವಿದ್ಯಾರ್ಥಿಗಳನ್ನು ಅನುತ್ತೀರ್ಣ ಮಾಡುವಂತಿಲ್ಲ (NO Detention) ಹಾಗೂ ಫಲಿತಾಂಶವನ್ನು ಸಂಬಂಧಿಸಿದ ವಿದ್ಯಾರ್ಥಿಗಳು ಮತ್ತು ಪೋಷಕರಿಗೆ ಮಾತ್ರ ನೀಡುವುದು.

10. 11ನೇ ತರಗತಿಯ ವಾರ್ಷಿಕ ಪರೀಕ್ಷೆಯಲ್ಲಿ ವಿದ್ಯಾರ್ಥಿಗಳು ಅನುತ್ತೀರ್ಣರಾದಲ್ಲಿ ಪೂರಕ ಪರೀಕ್ಷೆಯನ್ನು ಆಯಾ ಕಾಲೇಜು ಹಂತದಲ್ಲಿ ನಡೆಸುವುದು.

11. 9ನೇ ತರಗತಿಯ ಸಂಕಲನಾತ್ಮಕ ಮೌಲ್ಯಮಾಪನ-2ಕ್ಕೆ (SA-2) ತಗಲುವ ವೆಚ್ಚವನ್ನು ಪ್ರಸಕ್ತ ವರ್ಷಕ್ಕೆ ಮಾತ್ರ ಕರ್ನಾಟಕ ಶಾಲಾ ಪರೀಕ್ಷೆ ಮತ್ತು ಮೌಲ್ಯನಿರ್ಣಯ ಮಂಡಲಿಯಲ್ಲಿ ಲಭ್ಯವಿರುವ ಅನುದಾನದಲ್ಲಿ ಭರಿಸಲು ಅನುಮತಿ ನೀಡಲಾಗಿದೆ.

12. 11ನೇ ತರಗತಿಯ ವಾರ್ಷಿಕ ಪರೀಕ್ಷೆಯ ಪ್ರಶ್ನೆಪತ್ರಿಕೆಗಳ ರಚನೆ ಮತ್ತು ಡಿ.ಟಿ.ಪಿ ಕಾರ್ಯಕ್ಕೆ ತಗಲುವ ವೆಚ್ಚವನ್ನು ಪ್ರಸಕ್ತ ವರ್ಷಕ್ಕೆ ಮಾತ್ರ ಕರ್ನಾಟಕ ಶಾಲಾ ಪರೀಕ್ಷೆ ಮತ್ತು ಮೌಲ್ಯನಿರ್ಣಯ ಮಂಡಲಿಯಲ್ಲಿ ಲಭ್ಯವಿರುವ ಅನುದಾನದಲ್ಲಿ ಭರಿಸಲು ಅನುಮತಿಸಿದೆ.



Scanned with CamScanner

2023-24 ನೇ ಸಾಲಿನಿಂದ 9ನೇ ತರಗತಿಯ ವಿದ್ಯಾರ್ಥಿಗಳಿಗೆ ಸಂಕಲನಾತ್ಮಕ ಮೌಲ್ಯಮಾಪನ-2 (SA-2) ಮತ್ತು 11ನೇ ತರಗತಿಯ ವಿದ್ಯಾರ್ಥಿಗಳಿಗೆ ವಾರ್ಷಿಕ ಪರೀಕ್ಷೆಯನ್ನು ನಡೆಸುವ ನಿಟ್ಟಿನಲ್ಲಿ ವಿವಿಧ ಪ್ರಾಧಿಕಾರಗಳು ನಿರ್ವಹಿಸಬೇಕಾದ ಕರ್ತವ್ಯ ಹಾಗೂ ಜವಾಬ್ದಾರಿಗಳನ್ನು ಅನುಬಂಧ-1ರಲ್ಲಿ ವಿವರಿಸಲಾಗಿದೆ. ಅದರಂತೆ ತಪ್ಪದೇ ಕ್ರಮವಹಿಸಲು ಸಂಬಂಧಪಟ್ಟ ಪ್ರಾಧಿಕಾರಿಗಳಿಗೆ ಸೂಚಿಸಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

**(ಎಸ್. ಪ್ರಕಾಶ)** 21/9/22
ಸರ್ಕಾರದ ಅಧೀನ ಕಾರ್ಯದರ್ಶಿ(ಪ್ರೌಢ)
ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆ

**ಇವರಿಗೆ:**

1. ಆಯುಕ್ತರು, ಶಾಲಾ ಶಿಕ್ಷಣ ಇಲಾಖೆ, ಬೆಂಗಳೂರು.
2. ಅಪರ ಆಯುಕ್ತರು, ಶಾಲಾ ಶಿಕ್ಷಣ ಇಲಾಖೆ, ಕಲಬುರಗಿ/ಧಾರವಾಡ.
3. ಅಧ್ಯಕ್ಷರು, ಕರ್ನಾಟಕ ಶಾಲಾ ಪರೀಕ್ಷೆ ಮತ್ತು ಮೌಲ್ಯನಿರ್ಣಯ ಮಂಡಲಿ, ಬೆಂಗಳೂರು.
4. ರಾಜ್ಯ ಯೋಜನಾ ನಿರ್ದೇಶಕರು, ಸಮಗ್ರ ಶಿಕ್ಷಣ ಕರ್ನಾಟಕ, ಬೆಂಗಳೂರು.
5. ನಿರ್ದೇಶಕರು, ಶಾಲಾ ಶಿಕ್ಷಣ ಇಲಾಖೆ, ಪದವಿಪೂರ್ವ ಬೆಂಗಳೂರು.
6. ರಾಜ್ಯದ ಎಲ್ಲಾ ಜಿಲ್ಲಾಧಿಕಾರಿಗಳಿಗೆ. (ಸಂಬಂಧಪಟ್ಟ ಉಪನಿರ್ದೇಶಕರುಗಳ ಮುಖಾಂತರ)
7. ರಾಜ್ಯದ ಎಲ್ಲಾ ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳು, ಜಿಲ್ಲಾ ಪಂಚಾಯತ್ ರವರುಗಳಿಗೆ. (ಸಂಬಂಧಪಟ್ಟ ಉಪನಿರ್ದೇಶಕರುಗಳ ಮುಖಾಂತರ)
8. ಸಂಬಂಧಿಸಿದ ಎಲ್ಲಾ ನಿರ್ದೇಶಕರುಗಳಿಗೆ (ಸಂಬಂಧಪಟ್ಟ ಉಪನಿರ್ದೇಶಕರುಗಳ ಮುಖಾಂತರ)
9. ಶಾಲಾ ಶಿಕ್ಷಣ ಇಲಾಖೆಯ ಎಲ್ಲಾ ಜಿಲ್ಲಾ ಉಪನಿರ್ದೇಶಕರು (ಪದವಿ ಪೂರ್ವ), ಜಿಲ್ಲಾ ಉಪನಿರ್ದೇಶಕರು (ಆಡಳಿತ ಮತ್ತು ಅಭಿವೃದ್ಧಿ) ಮತ್ತು ಕ್ಷೇತ್ರಶಿಕ್ಷಣಾಧಿಕಾರಿಗಳಿಗೆ (ಸಂಬಂಧಪಟ್ಟ ನಿರ್ದೇಶಕರು, ಶಾಲಾ ಶಿಕ್ಷಣ ಇಲಾಖೆ, ಪದವಿಪೂರ್ವ ಬೆಂಗಳೂರು ಇವರ ಮುಖಾಂತರ)
10. ಶಾಖಾ ರಕ್ಷಾ ಕಡತ / ಹೆಚ್ಚುವರಿ ಪ್ರತಿ.

**ಪ್ರತಿ ಮಾಹಿತಿಗಾಗಿ:-**

1. ಮಾನ್ಯ ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವರ ಆಪ್ತ ಕಾರ್ಯದರ್ಶಿ.
2. ಸರ್ಕಾರದ ಪ್ರಧಾನ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿಯವರು, ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆ.
3. ಸರ್ಕಾರದ ಅಪರ ಕಾರ್ಯದರ್ಶಿ (ಸೇವೆಗಳು-1), ಇವರ ಆಪ್ತ ಸಹಾಯಕರು, ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆ,
4. ಸಮನ್ವಯಾಧಿಕಾರಿಗಳು, ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆ, ಬಹುಮಹಡಿಗಳ ಕಟ್ಟಡ, ಬೆಂಗಳೂರು (ಮಾಹಿತಿ ಕೇಂದ್ರ).



Scanned with CamScanner

## ಅನುಬಂಧ-1

## ಸರ್ಕಾರದ ಆದೇಶ ಸಂಖ್ಯೆ: ಇಪಿ 202 ಎಸ್‌ಎಲ್‌ಬಿ 2023 ದಿನಾಂಕ:21/09/2023

## ಕರ್ನಾಟಕ ಶಾಲಾ ಪರೀಕ್ಷೆ ಮತ್ತು ಮೌಲ್ಯನಿರ್ಣಯ ಮಂಡಲಿಯ ಕರ್ತವ್ಯ ಹಾಗೂ ಜವಾಬ್ದಾರಿಗಳು

1. 9ನೇ ತರಗತಿಯ ಸಂಕಲನಾತ್ಮಕ ಮೌಲ್ಯಮಾಪನ-2ನ್ನು (SA-2) ಕೆ.ಎಸ್.ಇ.ಎ.ಬಿಯ ಕರ್ನಾಟಕ ಶಾಲಾ ಗುಣಮಟ್ಟ ಮೌಲ್ಯಾಂಕನ ಮತ್ತು ಅಂಗೀಕರಣ ಪರಿಷತ್ತು (ಕೆ.ಎಸ್.ಕ್ಯು.ಎ.ಎ.ಸಿ), ವತಿಯಿಂದ ನಿರ್ವಹಿಸುವುದು.
2. 11ನೇ ತರಗತಿಯ ವಾರ್ಷಿಕ ಪರೀಕ್ಷೆಯನ್ನು ಕೆ.ಎಸ್.ಇ.ಎ.ಬಿಯ ಪಿಯು ಪರೀಕ್ಷಾ ವಿಭಾಗದಿಂದ ನಿರ್ವಹಿಸುವುದು.
3. ಸಂಕಲನಾತ್ಮಕ ಮೌಲ್ಯಮಾಪನ-2 (SA-2) ಹಾಗೂ ವಾರ್ಷಿಕ ಪರೀಕ್ಷೆಯ ವೇಳಾಪಟ್ಟಿಯನ್ನು ಸಾಕಷ್ಟು ಮುಂಚಿತವಾಗಿ ಸಿದ್ಧಪಡಿಸಿ, ಮಾಧ್ಯಮಗಳ ಮೂಲಕ ಎಲ್ಲಾ ವಿದ್ಯಾರ್ಥಿಗಳಿಗೆ, ಶಾಲಾ/ಕಾಲೇಜುಗಳಿಗೆ, ಪ್ರಾಂಶುಪಾಲರು / ಮುಖ್ಯ ಶಿಕ್ಷಕರಿಗೆ, ಉಪನ್ಯಾಸಕರು/ಶಿಕ್ಷಕರಿಗೆ ಮತ್ತು ಪೋಷಕರಿಗೆ ಮಾಹಿತಿ ತಲುಪುವಂತೆ ಮಾಡುವುದು.
4. ಸಂಕಲನಾತ್ಮಕ ಮೌಲ್ಯಮಾಪನ-2 (SA-2) ಹಾಗೂ ವಾರ್ಷಿಕ ಪರೀಕ್ಷೆಯನ್ನು ನಡೆಸುವ ಸಂಬಂಧ ಅಗತ್ಯವಾದ ಅಂಕಿ ಅಂಶಗಳಿಗೆ SATS ನಲ್ಲಿ ಲಭ್ಯವಿರುವ ದತ್ತಾಂಶಗಳನ್ನು ಬಳಸಿಕೊಳ್ಳುವುದು.
5. ಸಂಕಲನಾತ್ಮಕ ಮೌಲ್ಯಮಾಪನ-2 (SA-2) ಹಾಗೂ ವಾರ್ಷಿಕ ಪರೀಕ್ಷೆಯ ಮಾದರಿ ಪ್ರಶ್ನೆ ಪತ್ರಿಕೆಗಳು ವಿದ್ಯಾರ್ಥಿಗಳಿಗೆ, ಶಿಕ್ಷಕರು ಮತ್ತು ಉಪನ್ಯಾಸಕರುಗಳಿಗೆ ಲಭ್ಯವಾಗುವಂತೆ ಮಂಡಲಿಯ ವೆಬ್‌ಸೈಟ್‌ನಲ್ಲಿ ಪ್ರಕಟಿಸಲು ಕ್ರಮವಹಿಸುವುದು.
6. ಅಧ್ಯಕ್ಷರು, ಕರ್ನಾಟಕ ಶಾಲಾ ಪರೀಕ್ಷೆ ಮತ್ತು ಮೌಲ್ಯನಿರ್ಣಯ ಮಂಡಲಿ ರವರು 9ನೇ ತರಗತಿ ಸಂಕಲನಾತ್ಮಕ ಮೌಲ್ಯಮಾಪನ-2 (SA-2) ಮತ್ತು 11ನೇ ತರಗತಿಯ ವಾರ್ಷಿಕ ಪರೀಕ್ಷಾ ಕಾರ್ಯನಿರ್ವಹಣೆಗೆ ಡಯಟ್ ಮತ್ತು ಪದವಿ ಪೂರ್ವ ಕಾಲೇಜುಗಳಿಂದ ಅಧಿಕಾರಿಗಳನ್ನು ಮಂಡಲಿಗೆ ನಿಯೋಜಿಸಿಕೊಳ್ಳುವುದು.
7. 9ನೇ ತರಗತಿಯ ಸಂಕಲನಾತ್ಮಕ ಮೌಲ್ಯಮಾಪನ-2 (SA-2) ಮತ್ತು 11ನೇ ತರಗತಿಯ ವಾರ್ಷಿಕ ಪರೀಕ್ಷೆಯ ನಿರ್ವಹಣೆಗೆ ಕಾಲಕಾಲಕ್ಕೆ ಅಗತ್ಯವಿರುವ ಸುತ್ತೋಲೆಗಳನ್ನು ನೀಡುವುದು.

## ನಿರ್ದೇಶಕರು, ಶಾಲಾ ಶಿಕ್ಷಣ ಇಲಾಖೆ (ಪದವಿ ಪೂರ್ವ) ರವರ ಕರ್ತವ್ಯ ಹಾಗೂ ಜವಾಬ್ದಾರಿಗಳು

1. 11ನೇ ತರಗತಿಯ ವಾರ್ಷಿಕ ಪರೀಕ್ಷೆಯನ್ನು ಯಶಸ್ವಿಯಾಗಿ ನಿರ್ವಹಿಸಲು ಕೆ.ಎಸ್.ಇ.ಎ.ಬಿಗೆ ಸಹಕರಿಸುವುದು.
2. ನಿಗದಿತ ಕಾಲಾವಧಿಯಲ್ಲಿ ಉತ್ತರ ಪತ್ರಿಕೆಗಳ ಮೌಲ್ಯಮಾಪನ ಪ್ರಕ್ರಿಯೆ ಪೂರ್ಣಗೊಳಿಸಿದ ತಕ್ಷಣವೇ ಸಂಬಂಧಿಸಿದ ಪ್ರಾಂಶುಪಾಲರು ವಿದ್ಯಾರ್ಥಿವಾರು ಫಲಿತಾಂಶವನ್ನು SATSನಲ್ಲಿ ನಮೂದು ಮಾಡಿರುವುದನ್ನು ಖಾತ್ರಿ ಪಡಿಸಿಕೊಳ್ಳುವುದು.
3. 11ನೇ ತರಗತಿಯ ವಾರ್ಷಿಕ ಪರೀಕ್ಷೆಯ ಫಲಿತಾಂಶದ ದತ್ತಾಂಶಗಳನ್ನು ಸಂಗ್ರಹಿಸಿ ವಿದ್ಯಾರ್ಥಿವಾರು, ವಿಷಯವಾರು, ಜಿಲ್ಲಾವಾರು, ರಾಜ್ಯದ ವಿಶ್ಲೇಷಣಾ ವರದಿಯನ್ನು ಶಾಲಾ ಶಿಕ್ಷಣ ಇಲಾಖೆ (ಪದವಿ ಪೂರ್ವ) ಶೈಕ್ಷಣಿಕ ವಿಭಾಗದಿಂದ ಸಿದ್ಧಪಡಿಸುವುದು.
4. ವಿಶ್ಲೇಷಣಾ ವರದಿಯ ಆಧಾರದ ಮೇಲೆ ಕೈಗೊಳ್ಳಬೇಕಾದ ಅನುಪಾಲನಾ ಕ್ರಮಗಳ ಕ್ರಿಯಾಯೋಜನೆಯನ್ನು ರಚಿಸಿಕೊಂಡು ಮೇಲಧಿಕಾರಿಗಳ ಅನುಮತಿ ಪಡೆದು ನಿಗದಿತ ಕಾಲಮಿತಿಯಲ್ಲಿ ಅನುಷ್ಠಾನ ಮಾಡುವುದು.



Scanned with CamScanner

## ನಿರ್ದೇಶಕರು, DSERT ರವರ ಕರ್ತವ್ಯ ಹಾಗೂ ಜವಾಬ್ದಾರಿಗಳು

1. 9ನೇ ತರಗತಿಯ ಸಂಕಲನಾತ್ಮಕ ಮೌಲ್ಯಮಾಪನ-2ರ (SA-2) ನಂತರ ಲಭ್ಯವಾಗುವ ಫಲಿತಾಂಶದ ದತ್ತಾಂಶಗಳನ್ನಾಧರಿಸಿ ವಿದ್ಯಾರ್ಥಿವಾರು / ಶಾಲಾವಾರು / ಬ್ಲಾಕ್‌ವಾರು / ಜಿಲ್ಲಾವಾರು / ರಾಜ್ಯ ಹಂತದ ವಿಶ್ಲೇಷಣಾ ವರದಿಯನ್ನು ಸಿದ್ಧಪಡಿಸುವುದು.
2. ವಿಶ್ಲೇಷಣಾ ವರದಿಯ ಆಧಾರದ ಮೇಲೆ ಕೈಗೊಳ್ಳಬೇಕಾದ ಅನುಪಾಲನಾ ಕ್ರಮಗಳ ಕ್ರಿಯಾಯೋಜನೆಯನ್ನು ರಚಿಸಿಕೊಂಡು ಮೇಲಧಿಕಾರಿಗಳ ಅನುಮತಿ ಪಡೆದು ನಿಗದಿತ ಕಾಲಮಿತಿಯಲ್ಲಿ ಅನುಷ್ಠಾನ ಮಾಡುವುದು.
3. ವಿದ್ಯಾರ್ಥಿಗಳ ಕಲಿಕಾ ಕೊರತೆಯನ್ನು ವಿಷಯವಾರು/ಮಾಧ್ಯಮವಾರು ಗುರುತಿಸಿಕೊಂಡು ಕ್ರಿಯಾಯೋಜನೆಯನ್ನು ರೂಪಿಸಿಕೊಂಡು ಸೂಕ್ತ ತರಬೇತಿಗಳನ್ನು ನೀಡಲು ಕ್ರಮವಹಿಸುವುದು.
4. ತರಬೇತಿ ಕಾರ್ಯಕ್ಕಾಗಿ ಜಿಲ್ಲಾ ಮತ್ತು ತಾಲ್ಲೂಕು ಹಂತದ ಅಧಿಕಾರಿಗಳು ಮತ್ತು ಸಿಬ್ಬಂದಿಗಳಿಗೆ ಸೂಕ್ತ ಮಾರ್ಗದರ್ಶನ ನೀಡುವುದು ಮತ್ತು ಅನುಪಾಲನೆ ಮಾಡುವುದು.
5. ಉತ್ತರ ಪತ್ರಿಕೆಗಳ ಮೌಲ್ಯಮಾಪನದ ನಂತರ ಕೈಗೊಳ್ಳಲಾಗುವ ಕ್ರಿಯಾ ಯೋಜನೆಯ ಅನುಪಾಲನೆಯನ್ನು ಜಿಲ್ಲಾ ಮಟ್ಟದಲ್ಲಿ ಉಪನಿರ್ದೇಶಕರು, ಅಭಿವೃದ್ಧಿ ಹಾಗೂ ಆಡಳಿತ ರವರ ನೇತೃತ್ವದಲ್ಲಿ ಒಂದು ಸಮಿತಿಯನ್ನು ರಚಿಸಿ ಅನುಪಾಲನೆ ಮಾಡಲು ಮಾರ್ಗದರ್ಶನ ನೀಡುವುದು.
6. ಮೌಲ್ಯಮಾಪನದ ಆಧಾರದ ಮೇಲೆ ವಿದ್ಯಾರ್ಥಿವಾರು ಕಲಿಕಾ ಗುಣಮಟ್ಟ ಮತ್ತು ಶಿಕ್ಷಕರ ಬೋಧನಾ ಗುಣಮಟ್ಟದ ವಿಶ್ಲೇಷಣೆಯನ್ನು ಡಯಟ್ ಹಂತದಲ್ಲಿ ಕೈಗೊಂಡು ಮುಂದಿನ ದಿನಗಳಲ್ಲಿ ನೀತಿ ನಿರೂಪಣಾ ಪ್ರಕ್ರಿಯೆಗೆ ಬಳಸಿಕೊಳ್ಳಲು ವ್ಯವಸ್ಥೆ ಮಾಡುವುದು.

## ಜಿಲ್ಲಾ ಉಪನಿರ್ದೇಶಕರು, ಶಾಲಾ ಶಿಕ್ಷಣ ಇಲಾಖೆ (ಪದವಿ ಪೂರ್ವ) ರವರ ಜವಾಬ್ದಾರಿಗಳು

1. 11ನೇ ತರಗತಿಯ ವಾರ್ಷಿಕ ಪರೀಕ್ಷಾ ಪ್ರಕ್ರಿಯೆಯ ನಿರ್ವಹಣೆಗೆ ಅಧ್ಯಕ್ಷರು, ಕೆ.ಎಸ್.ಇ.ಎ.ಬಿ ರವರು ನೀಡುವ ಸುತ್ತೋಲೆಯ ಸೂಚನೆಗಳಂತೆ ಕ್ರಮವಹಿಸುವುದು.
2. ಯಾವುದೇ ವಿದ್ಯಾರ್ಥಿಗಳು ಪರೀಕ್ಷೆಯಿಂದ ವಂಚಿತರಾಗದಂತೆ ಸೂಕ್ತ ಕ್ರಮಕೈಗೊಳ್ಳುವುದು.
3. 11ನೇ ತರಗತಿಯ ವಾರ್ಷಿಕ ಪರೀಕ್ಷೆಯ ಪ್ರಶ್ನೆಪತ್ರಿಕೆಗಳನ್ನು ಜಿಲ್ಲಾ ಉಪನಿರ್ದೇಶಕರು, ಶಾಲಾ ಶಿಕ್ಷಣ ಇಲಾಖೆ (ಪದವಿ ಪೂರ್ವ) ರವರ ಲಾಗಿನ್‌ಗೆ ನೀಡಲಾಗುತ್ತಿದ್ದು, ಪ್ರಶ್ನೆಪತ್ರಿಕೆಗಳನ್ನು ಅಗತ್ಯ ಸಂಖ್ಯೆಗನುಗುಣವಾಗಿ ಮುದ್ರಿಸಿ ಸಂಬಂಧಿಸಿದ ಕಾಲೇಜುಗಳಿಗೆ ನೀಡಿ ಗೌಪ್ಯತೆ ಮತ್ತು ಭದ್ರತೆಯನ್ನು ಕಾಪಾಡಿಕೊಂಡು ವಾರ್ಷಿಕ ಪರೀಕ್ಷೆಯನ್ನು ನಿಗದಿಪಡಿಸಿದ ದಿನಾಂಕಗಳಂದೇ ಆಯಾ ಕಾಲೇಜು ಹಂತದಲ್ಲಿ ನಡೆಸುವ ಸಂಪೂರ್ಣ ಜವಾಬ್ದಾರಿ ಜಿಲ್ಲಾ ಉಪನಿರ್ದೇಶಕರದಾಗಿರುತ್ತದೆ.
4. ಉತ್ತರ ಪತ್ರಿಕೆಗಳ ಮೌಲ್ಯಮಾಪನ ಪ್ರಕ್ರಿಯೆಯನ್ನು ಆಯಾ ಕಾಲೇಜು ಹಂತದಲ್ಲಿಯೇ ನಿಗದಿತ ಸಮಯದೊಳಗೆ ಪೂರ್ಣಗೊಳಿಸುವುದು.
5. 11ನೇ ತರಗತಿಯ ವಾರ್ಷಿಕ ಪರೀಕ್ಷೆಯ ಉತ್ತರ ಪತ್ರಿಕೆಗಳ ಮೌಲ್ಯಮಾಪನ ಪ್ರಕ್ರಿಯೆಯನ್ನು ಪೂರ್ಣಗೊಳಿಸಿದ ತಕ್ಷಣವೇ ಸಂಬಂಧಿಸಿದ ಕಾಲೇಜು ಪ್ರಾಂಶುಪಾಲರು ವಿದ್ಯಾರ್ಥಿವಾರು ಫಲಿತಾಂಶ SATS ನಲ್ಲಿ ನಮೂದು ಮಾಡಿರುವುದನ್ನು ಖಾತ್ರಿ ಪಡಿಸಿಕೊಳ್ಳುವುದು.
6. ವಾರ್ಷಿಕ ಪರೀಕ್ಷೆಯಲ್ಲಿ ಅನುತ್ತೀರ್ಣಗೊಂಡ ವಿದ್ಯಾರ್ಥಿಗಳಿಗೆ ಸೂಕ್ತ ಕಾಲಮಿತಿಯೊಳಗೆ ಕಾಲೇಜು ಹಂತದಲ್ಲಿ ಪೂರಕ ಪರೀಕ್ಷೆಯನ್ನು ನಡೆಸುವುದು.



Scanned with CamScanner

## ಉಪನಿರ್ದೇಶಕರು (ಆಡಳಿತ), ಶಾಲಾ ಶಿಕ್ಷಣ ಇಲಾಖೆ ರವರ ಜವಾಬ್ದಾರಿಗಳು

1. 9ನೇ ತರಗತಿಯ ಸಂಕಲನಾತ್ಮಕ ಮೌಲ್ಯಮಾಪನ-2ರ (SA-2) ಪ್ರಕ್ರಿಯೆಯ ಯಶಸ್ವಿ ನಿರ್ವಹಣೆಗೆ ಅಧ್ಯಕ್ಷರು, ಕೆ.ಎಸ್.ಇ.ಎ.ಬಿ ರವರು ನೀಡುವ ಸುತ್ತೋಲೆಗಳಂತೆ ಕ್ರಮವಹಿಸುವುದು.
2. ಯಾವುದೇ ವಿದ್ಯಾರ್ಥಿಗಳು ಮೌಲ್ಯಾಂಕನದಿಂದ ವಂಚಿತರಾಗದಂತೆ ಸೂಕ್ತ ಕ್ರಮಕೈಗೊಳ್ಳುವುದು.
3. ಮೌಲ್ಯಾಂಕನದ ಪ್ರಶ್ನೆಪತ್ರಿಕೆಗಳನ್ನು ಕ್ಷೇತ್ರಶಿಕ್ಷಣಾಧಿಕಾರಿಗಳ ಲಾಗಿನ್‌ಗೆ ನೀಡಲಾಗುತ್ತಿದ್ದು. ಕ್ಷೇತ್ರಶಿಕ್ಷಣಾಧಿಕಾರಿಗಳು ಗೌಪ್ಯತೆ ಮತ್ತು ಭದ್ರತೆಯನ್ನು ಕಾಪಾಡಿಕೊಂಡು ಮೌಲ್ಯಾಂಕನದ ಪ್ರಶ್ನೆಪತ್ರಿಕೆಗಳನ್ನು ಮುದ್ರಿಸಿ ಶಾಲೆಗಳಿಗೆ ವಿತರಿಸಿ ನಿಗದಿತ ದಿನಾಂಕಗಳಂದೇ ಮೌಲ್ಯಾಂಕನವನ್ನು ನಡೆಸುವ ಸಂಬಂಧ ಸೂಕ್ತ ಕ್ರಮಕೈಗೊಳ್ಳುವುದು.
4. ಸಂಕಲನಾತ್ಮಕ ಮೌಲ್ಯಮಾಪನ-2ರ (SA-2) ಉತ್ತರ ಪತ್ರಿಕೆಗಳ ಮೌಲ್ಯಮಾಪನವನ್ನು ತಾಲ್ಲೂಕು ಹಂತದಲ್ಲಿ ನಿರ್ವಹಿಸಲು ಸೂಕ್ತ ಕ್ರಮವಹಿಸುವುದು.
5. ಮೌಲ್ಯಮಾಪನ ಪ್ರಕ್ರಿಯೆ ಪೂರ್ಣಗೊಳಿಸಿದ ತಕ್ಷಣವೇ ಮುಖ್ಯ ಶಿಕ್ಷಕರು ವಿದ್ಯಾರ್ಥಿವಾರು ಫಲಿತಾಂಶ SATS ನಲ್ಲಿ ನಮೂದು ಮಾಡಿರುವುದನ್ನು ಖಾತ್ರಿ ಪಡಿಸಿಕೊಳ್ಳುವುದು.
6. ಫಲಿತಾಂಶದ ನಂತರ ಉಪನಿರ್ದೇಶಕರು (ಅಭಿವೃದ್ಧಿ) ರವರ ಸಹಯೋಗದಲ್ಲಿ ವಿದ್ಯಾರ್ಥಿಗಳ ಕಲಿಕಾ ಗುಣಮಟ್ಟ ಮತ್ತು ಶಿಕ್ಷಕರ ಬೋಧನಾ ಗುಣಮಟ್ಟ ಉತ್ತಮಪಡಿಸಿಕೊಳ್ಳುವಿಕೆಗೆ ಡಿ.ಎಸ್.ಇ.ಆರ್.ಟಿ ಮಾರ್ಗದರ್ಶನದಲ್ಲಿ ವಿಶ್ಲೇಷಣೆ ಕೈಗೊಂಡು ಸೂಕ್ತ ಅನುಪಾಲನೆ/ಕಾರ್ಯಾಗಾರ/ ಮಾರ್ಗದರ್ಶನ ನೀಡಲು ಕ್ರಮ ಕೈಗೊಳ್ಳುವುದು.

## ಉಪನಿರ್ದೇಶಕರು (ಅಭಿವೃದ್ಧಿ), ಶಾಲಾ ಶಿಕ್ಷಣ ಇಲಾಖೆ ರವರ ಜವಾಬ್ದಾರಿಗಳು

1. ಉಪನಿರ್ದೇಶಕರು (ಆಡಳಿತ) ರವರ ಸಹಯೋಗದಲ್ಲಿ ವಿದ್ಯಾರ್ಥಿಗಳ ಕಲಿಕಾ ಗುಣಮಟ್ಟ ಮತ್ತು ಶಿಕ್ಷಕರ ಬೋಧನಾ ಗುಣಮಟ್ಟ ಉತ್ತಮಪಡಿಸಿಕೊಳ್ಳುವಿಕೆಗೆ ಡಿ.ಎಸ್.ಇ.ಆರ್.ಟಿ ಮಾರ್ಗದರ್ಶನದಲ್ಲಿ ವಿಶ್ಲೇಷಣೆ ಕೈಗೊಂಡು ಸೂಕ್ತ ಅನುಪಾಲನೆ/ಕಾರ್ಯಾಗಾರ/ ಮಾರ್ಗದರ್ಶನ ನೀಡಲು ಕ್ರಮ ಕೈಗೊಳ್ಳುವುದು.
2. ಫಲಿತಾಂಶದ ಆಧಾರದ ಮೇಲೆ ಕಂಡುಬಂದ ಫಲಶ್ರುತಿಗಳನ್ನು ಆಧರಿಸಿ ಶಿಕ್ಷಕರಿಗೆ ಅಗತ್ಯ ತರಬೇತಿಗಳ ಬಗ್ಗೆ ಕ್ರಿಯಾ ಯೋಜನೆಯನ್ನು ರೂಪಿಸಿ, ಡಿ.ಎಸ್.ಇ.ಆರ್.ಟಿಗೆ ಸಲ್ಲಿಸುವುದು.
3. ಜಿಲ್ಲಾ ಹಂತದ ವರದಿಯನ್ನು ಸಿದ್ಧಪಡಿಸಿ ಡಿ.ಎಸ್.ಇ.ಆರ್.ಟಿಗೆ ಸಲ್ಲಿಸುವುದು.

## ಕ್ಷೇತ್ರ ಶಿಕ್ಷಣಾಧಿಕಾರಿಗಳು, ಶಾಲಾ ಶಿಕ್ಷಣ ಇಲಾಖೆ ರವರ ಜವಾಬ್ದಾರಿಗಳು

1. 9ನೇ ತರಗತಿಯ ಸಂಕಲನಾತ್ಮಕ ಮೌಲ್ಯಮಾಪನ-2 ರಿಂದ (SA-2) ಯಾವುದೇ ವಿದ್ಯಾರ್ಥಿಗಳು ವಂಚಿತರಾಗದಂತೆ ಸೂಕ್ತ ಕ್ರಮಕೈಗೊಳ್ಳುವುದು.
2. 9ನೇ ತರಗತಿಯ ಮೌಲ್ಯಾಂಕನದ ಪ್ರಶ್ನೆಪತ್ರಿಕೆಗಳನ್ನು ಕ್ಷೇತ್ರಶಿಕ್ಷಣಾಧಿಕಾರಿಗಳ ಲಾಗಿನ್‌ನಲ್ಲಿ ಲಭ್ಯಮಾಡಲಾಗುತ್ತಿದ್ದು, ಗೌಪ್ಯತೆ ಮತ್ತು ಭದ್ರತೆಯನ್ನು ಕಾಪಾಡಿಕೊಂಡು ಮೌಲ್ಯಾಂಕನದ ಪ್ರಶ್ನೆಪತ್ರಿಕೆಗಳನ್ನು ಅಗತ್ಯ ಸಂಖ್ಯೆಗನುಗುಣವಾಗಿ ಮುದ್ರಿಸಿಕೊಂಡು ಶಾಲೆಗಳಿಗೆ ವಿತರಿಸಿ ನಿಗದಿತ ದಿನಾಂಕಗಂದೇ ಮೌಲ್ಯಾಂಕನವನ್ನು ನಡೆಸುವ ಸಂಪೂರ್ಣ ಜವಾಬ್ದಾರಿ ಕ್ಷೇತ್ರಶಿಕ್ಷಣಾಧಿಕಾರಿಗಳದಾಗಿರುತ್ತದೆ.
3. ಉತ್ತರ ಪತ್ರಿಕೆಗಳ ಮೌಲ್ಯಮಾಪನವನ್ನು ತಾಲ್ಲೂಕು ಹಂತದಲ್ಲಿ ನಿರ್ವಹಿಸಬೇಕಿದ್ದು, ಅಗತ್ಯ ಶಿಕ್ಷಕರನ್ನು ನಿಯೋಜಿಸಿ ಮೌಲ್ಯ ಮಾಪನವನ್ನು ಸಕಾಲದಲ್ಲಿ ನಿರ್ವಹಿಸುವುದು.



Scanned with CamScanner

Scanned with CamScanner